# ಕರ್ನಾಟಕ ವಿಧಾನ ಪರಿಷತ್ತು

01. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 823

02. ಮಾನ್ಯ ವಿಧಾನ ಪರಿಷತ್ ಸದಸ್ಯರ ಹೆಸರು : ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ)

03. ಉತ್ತರಿಸುವ ದಿನಾಂಕ : 26-12-2022

04. ಉತ್ತರಿಸುವ ಸಚಿವರು : ಮಾನ್ಯ ಗೃಹ ಸಚಿವರು

<table>
<tr><th>ಕ್ರ.ಸ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕುಸಿಯುತ್ತಿರುವುದರಿಂದ ಗಲಭೆ, ಸುಲಿಗೆ, ಕೊಲೆ, ಅತ್ಯಾಚಾರ ಇನ್ನೂ ಮುಂತಾದ ಕಾನೂನು ಬಾಹಿರ ಚಟುವಟಿಕೆಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;</td><td>ರಾಜ್ಯದಲ್ಲಿ ಗಲಭೆ, ಸುಲಿಗೆ, ಕೊಲೆ, ಅತ್ಯಾಚಾರ ಇನ್ನೂ ಮುಂತಾದ ಕಾನೂನು ಬಾಹಿರ ಚಟುವಟಿಕೆಗಳು ಕಂಡು ಬಂದಲ್ಲಿ ತಕ್ಷಣ ಪ್ರಕರಣಗಳನ್ನು ದಾಖಲು ಮಾಡಲಾಗುತ್ತದೆ ಹಾಗೂ ಘಟನಾ ಸ್ಥಳಕ್ಕೆ ಹಿರಿಯ ಪೊಲೀಸ್ ಅಧಿಕಾರಿಗಳು ಭೇಟಿ ನೀಡಿ ಕಟ್ಟುನಿಟ್ಟಿನ ಕ್ರಮ ಜರುಗಿಸಲಾಗುತ್ತದೆ.</td></tr>
<tr><td>ಆ</td><td>ಬಂದಿದ್ದಲ್ಲಿ, ರಾಜ್ಯದಲ್ಲಿ ಎಷ್ಟು ಗಲಭೆ, ಸುಲಿಗೆ, ಕೊಲೆ, ಅತ್ಯಾಚಾರ ಪ್ರಕರಣಗಳು ದಾಖಲಾಗಿವೆ;</td><td>ರಾಜ್ಯದಲ್ಲಿ ಕಳೆದ 03 ವರ್ಷಗಳಲ್ಲಿ 798 ಗಲಭೆ ಪ್ರಕರಣಗಳು ದಾಖಲಾಗಿರುತ್ತವೆ. ವರ್ಷವಾರು ಅಂಕಿ-ಅಂಶಗಳ ಮಾಹಿತಿ ಈ ಕೆಳಕಂಡಂತ್ತಿರುತ್ತದೆ.<br>
<table>
<tr><th rowspan="2">ವರ್ಷ</th><th rowspan="2">ಗಲಭೆ</th><th rowspan="2">ಸುಲಿಗೆ</th><th rowspan="2">ಕೊಲೆ</th><th colspan="2">ಅತ್ಯಾಚಾರ</th></tr>
<tr><th>ಮಹಿಳೆಯರು</th><th>ಮಕ್ಕಳ ಮೇಲಿನ (ಅತ್ಯಾಚಾರ & ಲೈಂಗಿಕ ದೌರ್ಜನ್ಯ)</th></tr>
<tr><td>2020</td><td>307</td><td>858</td><td>1318</td><td>479</td><td>2164</td></tr>
<tr><td>2021</td><td>201</td><td>982</td><td>1351</td><td>558</td><td>2858</td></tr>
<tr><td>2022</td><td>290</td><td>961</td><td>1265</td><td>495</td><td>2720</td></tr>
</table></td></tr>
<tr><td>ಇ</td><td>ಈ ಪ್ರಕರಣಗಳನ್ನು ತಡೆಗಟ್ಟಲು ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ?</td><td>ಈ ಪ್ರಕರಣಗಳನ್ನು ತಡೆಗಟ್ಟಲು ಪೊಲೀಸ್ ಇಲಾಖೆಯಿಂದ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ.<br>➢ ಠಾಣಾ ವ್ಯಾಪ್ತಿಯಲ್ಲಿ ಶಾಂತಿ ಸಭೆ, ಯುವಜನ ಸಭೆ, ಮೊಹಲ್ಲ ಮಿಟಿಂಗ್, ನಾಗರೀಕ ಸಮಿತಿ ಸಭೆಗಳನ್ನು ನಡೆಸಿ ಸಾರ್ವಜನಿಕರಿಗೆ ಮತ್ತು ಯುವಕರಿಗೆ ತಿಳುವಳಿಕೆಗಳನ್ನು ನೀಡಲಾಗುತ್ತಿದೆ ಹಾಗೂ ವೃತ್ತ ಉಪ ವಿಭಾಗ, ಜಿಲ್ಲಾ ಮಟ್ಟದಲ್ಲಿಯೂ ಸಹ ಸಭೆಗಳನ್ನು ಕೈಗೊಳ್ಳಲಾಗುತ್ತಿದೆ.<br>➢ ಕಾನೂನು ಮತ್ತು ಸುವ್ಯವಸ್ಥೆಗೆ ಭಂಗ ತರುವ ವ್ಯಕ್ತಿಗಳು/ ಸಂಘಟನೆಗಳು/ಸಾಮಾಜಿಕ ಜಾಲತಾಣಗಳ ಬಗ್ಗೆ ಸತತ ನಿಗಾ ಇಡಲಾಗಿದೆ.<br>➢ ಠಾಣಾ ವ್ಯಾಪ್ತಿಯಲ್ಲಿ ರಾತ್ರಿ ಬೀಟ್ ಮತ್ತು ಶುಭೋದಯ (ಗುಡ್ ಮಾರ್ನಿಂಗ್) ಬೀಟುಗಳನ್ನು ಕೈಗೊಳ್ಳಲಾಗಿದೆ. ಏಕ ಕಾಲದಲ್ಲಿ ಜಿಲ್ಲಾ ವ್ಯಾಪ್ತಿಯಲ್ಲಿ ಕ್ಷಿಪ್ರ ವಾಹನ ತಪಾಸಣೆಗಳನ್ನು ಕೈಗೊಳ್ಳಲಾಗಿದೆ.<br>➢ ಅಂತರ್‌ರಾಜ್ಯ ಸಂಪರ್ಕಿಸುವ ಗಡಿಯಲ್ಲಿ ಚೆಕ್ ಪೋಸ್ಟ್‌ಗಳನ್ನು ಪ್ರಾರಂಭಿಸಿದ್ದು,</td></tr>
</table>

| | | |
|---|---|---|
| | | ವಾಹನಗಳನ್ನು ಸಂಶಯಿತ ವ್ಯಕ್ತಿಗಳನ್ನು ಹಾಗೂ ಯಾರು ಶಸ್ತ್ರಾಸ್ತ್ರಗಳನ್ನು ಸಾಗಿಸುವರೊ ಅಂತಹ ವ್ಯಕ್ತಿಗಳನ್ನು ತಪಾಸಣೆ ಮಾಡಲಾಗುತ್ತಿದೆ.<br>➢ ಪ್ರಮುಖ ಹಬ್ಬದ ಆಚರಣೆಗಳ ಸಂದರ್ಭದಲ್ಲಿ ಎಲ್ಲಾ ಸಮುದಾಯಗಳ ಮುಖಂಡರುಗಳನ್ನು ಒಳಗೊಂಡ ಶಾಂತಿ ಸಭೆಗಳನ್ನು ಜಿಲ್ಲಾ ಮಟ್ಟದಲ್ಲಿ, ಉಪ-ವಿಭಾಗದ ಮಟ್ಟದಲ್ಲಿ ಮತ್ತು ಪೊಲೀಸ್ ಠಾಣೆ ಮಟ್ಟದಲ್ಲಿ ನಡೆಸಲಾಗುತ್ತಿದೆ.<br>➢ ಗಲಭೆ ಪ್ರಕರಣಗಳಲ್ಲಿ ಭಾಗಿಯಾಗುವ ಆರೋಪಿಗಳ ವಿರುದ್ಧ ಸೂಕ್ತ ಕಾನೂನು ರೀತ್ಯಾ ಕ್ರಮಗಳನ್ನು ಜರುಗಿಸಲಾಗುತ್ತಿರುತ್ತದೆ.<br>➢ ಗಲಭೆ ಪ್ರಕರಣಗಳಲ್ಲಿ ಸರ್ಕಾರದ ಆಸ್ತಿ ನಷ್ಟವಾಗಿದ್ದಲ್ಲಿ ಸಕ್ಷಮ ಪ್ರಾಧಿಕಾರವನ್ನು ನೇಮಿಸಿ ಆರೋಪಿಗಳ ಚರಾಸ್ತಿ ಮತ್ತು ಸ್ಥಿರಾಸ್ತಿಗಳನ್ನು ಪತ್ತೆ ಹಚ್ಚಿ, ಜಪ್ತಿ ಮಾಡಿ ನಷ್ಟ ಪರಿಹಾರಕ್ಕೆ ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ಗುಪ್ತ ಮಾಹಿತಿ ಸಿಬ್ಬಂದಿ ಹಾಗೂ ಬೀಟ್ ಸಿಬ್ಬಂದಿಯವರ ಮೂಲಕ ಮುಂಗಡವಾಗಿ ಮಾಹಿತಿಯನ್ನು ಸಂಗ್ರಹಿಸಿ ಯಾವುದೇ ಅಹಿತಕರ ಘಟನೆಗಳು ಜರುಗದಂತೆ ಸೂಕ್ತ ಕ್ರಮ ಕೈಕೊಳ್ಳಲಾಗುತ್ತಿದೆ.<br>➢ ಪೊಲೀಸ್ ಸಿಬ್ಬಂದಿಯವರಿಗೆ ಪಿಕೆಟಿಂಗ್ ಕರ್ತವ್ಯ ಮತ್ತು ಅಧಿಕಾರಿಗಳಿಗೆ ಪೆಟ್ರೋಲಿಂಗ್ ಕರ್ತವ್ಯಕ್ಕಾಗಿ ನಿಯೋಜಿಸಲಾಗಿರುತ್ತದೆ<br>➢ ಅಧೀನ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಸದರಿ ಘಟನಾವಳಿಗಳ ಬಗ್ಗೆ ಕೂಲಂಕಷವಾಗಿ ಚರ್ಚಿಸಿ ಇಂತಹ ಅಹಿತಕರ ಘಟನೆಗಳು ಮರುಕಳಿಸದಂತೆ ನೋಡಿಕೊಳ್ಳಲು ಗಲಭೆ ನಡೆದ ಪ್ರದೇಶಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು, ಹೈ ಮಾಸ್ಕ್ ಲೈಟ್‌ಗಳನ್ನು ಅಳವಡಿಸಲಾಗಿರುತ್ತದೆ.<br>➢ ದಿನದ 24 ಗಂಟೆಗಳ ಕಾಲ ಗಸ್ತು ಕರ್ತವ್ಯಕ್ಕಾಗಿ ಶಕ್ತಿ ಪೆಟ್ರೋಲಿಂಗ್, ಹೊಯ್ಸಳ ವಾಹನ ನಿಯಮಿತವಾಗಿ ನಿಯೋಜಿಸಲಾಗಿದೆ. ಕಾನೂನು ಸುವ್ಯವಸ್ಥೆಗೆ ಧಕ್ಕೆ ತರುವಂತಹ ರೌಡಿಗಳಿಗೆ ಕಠಿಣವಾದ ಎಚ್ಚರಿಕೆಗಳನ್ನು ನೀಡಿ, ಯಾವುದೇ ಕೃತ್ಯಗಳನ್ನು ಮಾಡಿದಾಗ ಅವರ ಮೇಲೆ ಆಗುವ ಪರಿಣಾಮಗಳ ಗಂಭೀರತೆಯ ಬಗ್ಗೆ ಅವರಿಗೆ ಮನವರಿಕೆ ಮಾಡಿಕೊಡಲಾಗಿರುತ್ತದೆ.<br>➢ ಸಾಮಾಜಿಕ ಜಾಲ ತಾಣಗಳಲ್ಲಿ ಕೋಮು ಸೌಹಾರ್ದತೆ ಕದಡುವ ವ್ಯಕ್ತಿಗಳನ್ನು ಗುರುತಿಸಿ ಅಂಥವರ ಮೇಲೆ ನಿಗಾ ಇಡಲಾಗುತ್ತಿದೆ.<br>➢ ಸಮಾಜಘಾತುಕ ಚಟುವಟಿಕೆಗಳಲ್ಲಿ ತೊಡಗುವವರ ಮೇಲೆ ಮುಂಜಾಗ್ರತಾ ಕ್ರಮವಾಗಿ ಭದ್ರತಾ ಕಾಯ್ದೆ/ ಗೂಂಡಾ ಕಾಯ್ದೆಯ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ಜಿಲ್ಲೆಗೆ ಹೊಂದಿಕೊಂಡಂತೆ ಇರುವ ಹೊರರಾಜ್ಯ, ಹೊರ ಜಿಲ್ಲೆಗಳಿಂದ ನಮ್ಮ ಜಿಲ್ಲೆಗೆ ಪ್ರವೇಶ ಮಾಡುವ ಮಾರ್ಗದಲ್ಲಿ ಚೆಕ್‌ಪೋಸ್ಟ್‌ಗಳನ್ನು ಸ್ಥಾಪಿಸಿ ಸೂಕ್ತ ನಿಗಾ ವಹಿಸಲಾಗಿದೆ.<br>➢ ರೌಡಿಗಳು ಮತ್ತು ಮತೀಯ ಗೂಂಡಾಗಳ ಮೇಲೆ ಕಠಿಣ ಕ್ರಮಗಳನ್ನು ಕೈಗೊಳ್ಳಲಾಗಿದ್ದು ಅವರ ಚಟುವಟಿಕೆಯ ಮೇಲೆ ಸೂಕ್ತ ನಿಗಾ ಇರಿಸಲಾಗಿದೆ.<br>➢ ಠಾಣಾ ವ್ಯಾಪ್ತಿಯಲ್ಲಿ ಸಕ್ರಿಯವಾಗಿರುವ ರೌಡಿ ಆಸಾಮಿಗಳ ಮತ್ತು ಮತೀಯ ಗೂಂಡಾಗಳ ಚಲನವಲನಗಳನ್ನು ಹಾಗೂ ಅವರ ಚಟುವಟಿಕೆಯ ಕುರಿತು ಮಾಹಿತಿ ಸಂಗ್ರಹಿಸಿ ಅವರ ವಿರುದ್ಧ ಸಿ.ಆರ್.ಪಿ.ಸಿ. ಪ್ರಕಾರ ಪ್ರಕರಣ ದಾಖಲಿಸಿ ಬಾಂಡ್ ಮುಚ್ಚಳಿಕೆ ಪಡೆಯುವುದು.<br>➢ ದೈಹಿಕ ಹಲ್ಲೆ ನಡೆಸಿದ, ತನಿಖೆ ಅಥವಾ ನ್ಯಾಯಾಲಯದ ವಿಚಾರಣೆಯಲ್ಲಿರುವ ಪ್ರಕರಣಗಳಲ್ಲಿ ಭಾಗಿಯಾದ ರೌಡಿ ಆಸಾಮಿಗಳ ಮತ್ತು ಮತೀಯ |

ಗೂಂಡಾಗಳು ಪುನಃ ದೈಹಿಕ ಹಲ್ಲೆ ಪ್ರಕರಣದಲ್ಲಿ ಭಾಗಿಯಾದರೆ ಸದರಿ ಆರೋಪಿಗಳು ಈಗಾಗಲೇ ನ್ಯಾಯಾಲಯದಿಂದ ಪಡೆದಿರುವ ಜಾಮೀನು ರದ್ದು ಪಡಿಸಲು ಕ್ರಮ ತೆಗೆದುಕೊಳ್ಳಲಾಗುವುದು.

- ಕರ್ನಾಟಕ ಪೊಲೀಸ್ ಕಾಯ್ದೆ ಅನ್ವಯ ಗಡಿಪಾರು ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.
- ರೌಡಿ ಆಸಾಮಿಗಳು ಮತ್ತು ಮತೀಯ ಗೂಂಡಾಗಳು ಅಪರಾಧಿಕ ಪ್ರಕರಣಗಳಲ್ಲಿ ಭಾಗಿಯಾಗಿ ಕ್ರಿಮಿನಲ್ ಚಟುವಟಿಕೆಗಳಲ್ಲಿ ಮುಂದುವರಿದಿದ್ದಲ್ಲಿ ಅವರನ್ನು ನಿಯಂತ್ರಣದಲ್ಲಿಡಲು ಗೂಂಡ ಕಾಯ್ದೆಯಂತೆ ಕ್ರಮ ಕೈಗೊಳ್ಳಲು ಕ್ರಮ ತೆಗೆದುಕೊಳ್ಳಲಾಗುವುದು.
- ಮೇಲ್ಕಂಡ ಎಲ್ಲಾ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದ್ದು, ಯಾವುದೇ ಕೋಮುಗಲಭೆ ಕಂಡು ಬಂದಲ್ಲಿ ತಕ್ಷಣ ಪ್ರಕರಣ ದಾಖಲಿಸಿ ಹಿರಿಯ ಪೊಲೀಸ್ ಅಧಿಕಾರಿರವರು ಸ್ಥಳಕ್ಕೆ ಭೇಟಿ ನೀಡಿ ಅಪರಾಧಿಯನ್ನು ದಸ್ತಗಿರಿ ಮಾಡಿ ಸೂಕ್ತ ಕಾನೂನು ಕ್ರಮ ತೆಗೆದುಕೊಳ್ಳಲಾಗುವುದು.

**ಅತ್ಯಾಚಾರ ಮತ್ತು ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣಗಳನ್ನು ತಡೆಗಟ್ಟಲು ಹಾಗೂ ಇತರೆ ಅಪರಾಧ ಕೃತ್ಯಗಳನ್ನು ನಿಯಂತ್ರಿಸಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.**

- ದೂರುದಾರರುಗಳಿಗೆ/ ಸಂತ್ರಸ್ತರುಗಳಿಗಾಗಿ ಪ್ರತಿ ಪೊಲೀಸ್ ಠಾಣೆಗಳಲ್ಲಿ ಅಧಿಕಾರಿಗಳನ್ನು ಸಂಪರ್ಕಿಸಲು ಅವರುಗಳ ದೂರುವಾಣಿ ಸಂಖ್ಯೆಗಳುಳ್ಳ ಫಲಕಗಳನ್ನು ಹಾಕಲಾಗಿದೆ.
- ಸರ್ಕಾರದ ಆದೇಶದ ಸಂಖ್ಯೆ: ಮಮಇ/70/ಮಮಅ/2014, ದಿ.12/6/2014ರಲ್ಲಿ ದೌರ್ಜನ್ಯಕ್ಕೆ ಒಳಗಾದ ಮಹಿಳೆಯರಿಗೆ ಒಂದೇ ಸೂರಿನಡಿ ಸಮಗ್ರ ಸೌಲಭ್ಯಗಳನ್ನು ಒದಗಿಸುವ ಸಲುವಾಗಿ ರಾಜ್ಯದ ಎಲ್ಲಾ 30 ಜಿಲ್ಲಾ ಆಸ್ಪತ್ರೆಗಳಲ್ಲಿ ಹಾಗೂ ಬೆಂಗಳೂರು ನಗರದ ಬೌರಿಂಗ್ ಆಸ್ಪತ್ರೆ, ಕೆಸಿ ಜನರಲ್ ಆಸ್ಪತ್ರೆ, ವೈದ್ಯಕೀಯ ಮಹಾವಿದ್ಯಾಲಯ, ನಿಮ್ಹಾನ್ಸ್ ಮತ್ತು ಜಯದೇವ ಹೃದ್ರೋಗ ಆಸ್ಪತೆಗಳಲ್ಲಿ "**ಗೆಳತಿ ವಿಶೇಷ ಚಿಕಿತ್ಸಾ ಘಟಕ**" ಗಳನ್ನು ಸ್ಥಾಪಿಸಲಾಗಿದೆ.
- ಕಮ್ಯುನಿಟಿ ಪೊಲೀಸಿಂಗ್ ಮೂಲಕ ಜನಸಂಪರ್ಕ ಮತ್ತು ಜನಸ್ನೇಹಿ ಸಭೆಗಳನ್ನು ನಡೆಸಲಾಗುತ್ತಿದೆ.
- ಮಹಿಳೆಯರ ಸುರಕ್ಷತೆಯ ಬಗ್ಗೆ ಹೆಚ್ಚಿನ ಆದ್ಯತೆ ಕೊಟ್ಟು ಮಹಿಳಾ ಸಹಾಯವಾಣಿ ಕೇಂದ್ರ "ಸ್ಪಂದನ"ವನ್ನು ಬೆಂಗಳೂರು ನಗರದ ಮಲ್ಲೇಶ್ವರಂ ಮತ್ತು ಬಸವನಗುಡಿಯಲ್ಲಿ ತೆರೆಯಲಾಗಿದೆ.
- ಕಷ್ಟದಲ್ಲಿರುವ ಮಹಿಳೆಯರ ಸಹಾಯಕ್ಕಾಗಿ ಮಹಿಳಾ ಸಹಾಯವಾಣಿ ಸಂಖ್ಯೆ: 1091 ಮತ್ತು 22943225 ಕಾರ್ಯ ನಿರ್ವಹಿಸುತ್ತಿವೆ.
- ಸದರಿ ಕಾಯ್ದೆಯ ಪರಿಚಯ, ಕಾಯ್ದೆಯಲ್ಲಿ ಪ್ರಕರಣಗಳನ್ನು ದಾಖಲಿಸುವಾಗ ಅನುಸರಿಸಬೇಕಾದ ಕ್ರಮಗಳು, ದೌಜನ್ಯಕೊಳಗಾದ ಮಕ್ಕಳೊಂದಿಗೆ ಹೇಗೆ ನಡೆದುಕೊಳ್ಳಬೇಕು, ಅವರು ಆರೈಕೆ, ವೈದ್ಯಕೀಯ ಚಿಕಿತ್ಸೆಗೆ ಒಳಪಡಿಸುವ ಕ್ರಮಗಳು, ಪುನರ್‌ವಸತಿ, ಮಾಧ್ಯಮಗಳ ಜವಾಬ್ದಾರಿ, ಸಮಾಜದ ಕರ್ತವ್ಯಗಳು, ಪರಿಹಾರ ಒದಗಿಸುವುದು ಹಾಗೂ ಇನ್ನಿತರ ವಿಷಯಗಳ ಕುರಿತು ತನಿಖಾಧಿಕಾರಿಗಳಿಗೆ ಸಹಾಯವಾಗುವ ನಿಟ್ಟಿನಲ್ಲಿ ನಿರ್ದಿಷ್ಠ ಕಾರ್ಯವಿಧಾನ

| | | |
|---|---|---|
| | | (ಎಸ್.ಓ.ಪಿ) ಯನ್ನು ಸಿದ್ದಪಡಿಸಿ ಎಲ್ಲಾ ಪೊಲೀಸ್ ಠಾಣೆಗಳಿಗೆ ಒದಗಿಸಲಾಗಿದೆ.<br>➢ ಸಾರ್ವಜನಿಕ ಸ್ಥಳಗಳಲ್ಲಿ ಕರಪತ್ರ, ಭಿತ್ತಿಪತ್ರ, ಬ್ಯಾನರ್ಸ್ ಪೋಸ್ಟರ್ಸ್‌ಗಳು ಪ್ರಕಟಿಸುವುದು ಹಾಗೂ ಸಣ್ಣ ನಾಟಕಗಳು, ಚಿತ್ರಕಲೆಯ ಸ್ಪರ್ಧೆ ಏರ್ಪಡಿಸುವುದು, ಮತ್ತು ಮಹಿಳಾ ದೌರ್ಜನ್ಯದ ಬಗ್ಗೆ ಪೊಲೀಸರಿಗೆ ಮಾಹಿತಿ ಒದಗಿಸುವಂತೆ ಜನ ಜಾಗೃತಿ ಕಾರ್ಯಕ್ರಮಗಳನ್ನು ಏರ್ಪಡಿಸಿ ಅರಿವು ಮೂಡಿಸಲಾಗುತ್ತಿದೆ.<br>➢ ಅತ್ಯಾಚಾರ, ಪೋಕ್ಸೋ ಪ್ರಕರಣಗಳ ತನಿಖೆಯನ್ನು ಅಪರಾಧ ಕಾನೂನು ತಿದ್ದುಪಡಿ ಸುಗ್ರೀವಾಜ್ಞೆ, 2018 ರಲ್ಲಿನ ತಿದ್ದುಪಡಿಯಂತೆ ನಿಗಧಿಪಡಿಸಿರುವ 60 ದಿನಗಳ ಕಾಲಮಿತಿಯಲ್ಲಿ ತನಿಖೆಯನ್ನು ಪೂರ್ಣಗೊಳಿಸಲು ರಾಜ್ಯದ ಎಲ್ಲಾ ಘಟಕಾಧಿಕಾರಿಗಳಿಗೆ ಸುತ್ತೋಲೆಯ ಮೂಲಕ ನಿರ್ದೇಶನಗಳನ್ನು ನೀಡಲಾಗಿರುತ್ತದೆ<br>➢ ಮಹಿಳೆಯರು ಮತ್ತು ಮಕ್ಕಳ ಮೇಲಿನ ದೌರ್ಜನ್ಯವನ್ನು ತಡೆಗಟ್ಟುವ ನಿಟ್ಟಿನಲ್ಲಿ 2019-20ನೇ ಸಾಲಿನಲ್ಲಿ ರೂ3.88 ಕೋಟಿ ಅನುದಾನವನ್ನು ನಿರ್ಭಯ ಯೋಜನೆ ಅಡಿಯಲಿ ಬಿಡುಗಡೆ ಮಾಡಿದ್ದು, ಸದರಿ ಅನುದಾನದಲ್ಲಿ ರಾಜ್ಯದ 30 ಮಹಿಳಾ ಪೊಲೀಸ್ ಠಾಣೆಗಳಲ್ಲಿ ಮಾನವ ಕಳ್ಳಸಾಗಣಿಕೆ ನಿಷೇಧ ಘಟಕಗಳನ್ನು ಹಾಗೂ 2021-22ನೇ ಸಾಲಿನಲ್ಲಿ ಬಿಡುಗಡೆಯಾಗಿರುವ ರೂ 37.90 ಲಕ್ಷಗಳ ಅನುದಾನದಲ್ಲಿ ಇನ್ನೂ 5 ಮಾನವ ಕಳ್ಳಸಾಗಣಿಕೆ ನಿಷೇಧ ಘಟಕಗಳನ್ನು ಸ್ಥಾಪಿಸಲಾಗಿದೆ.<br>➢ ಮಕ್ಕಳ ಮೇಲಿನ ದೌರ್ಜನ್ಯ ಪ್ರಕರಣಗಳ ತ್ವರಿತ ಇತ್ಯರ್ಥಕ್ಕಾಗಿ ಸರ್ಕಾರವು, ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಪ್ರತ್ಯೇಕ ಮಕ್ಕಳ ನ್ಯಾಯಾಲಯಗಳು (Children's Courts) ನ್ಯಾಯಾಲಯಗಳನ್ನು ಸ್ಥಾಪಿಸಿರುತ್ತದೆ. ಹಾಗೆಯೇ ವಾದ ಮಂಡಿಸಲು ಸರ್ಕಾರಿ ಅಭಿಯೋಜಕರನ್ನು ಸಹ ನೇಮಿಸಲಾಗಿರುತ್ತದೆ.<br>➢ ರಾಜ್ಯದ ಪೊಲೀಸ್ ಠಾಣಾ ಸರಹದ್ದುಗಳಲ್ಲಿ ಶಾಲಾ ಕಾಲೇಜುಗಳಿಗೆ ಅಧಿಕಾರಿ ಮತ್ತು ಸಿಬ್ಬಂದಿಗಳು ನಿಯಮಿತವಾಗಿ ಭೇಟಿ ನೀಡಿ ವಿದ್ಯಾರ್ಥಿಗಳಲ್ಲಿ ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳು, ಅಪರಾಧ ಕೃತ್ಯಗಳ ಬಗ್ಗೆ, ಮಕ್ಕಳ ಮೇಲಿನ ದೌರ್ಜನ್ಯ, ಮಾನವ ಕಳ್ಳ ಸಾಗಣೆ, ಸಾಮಾಜಿಕ ಜಾಲತಾಣ, ಆನ್‌ಲೈನ್ ಗೇಮ್ ಮತ್ತು ವಂಚನೆಗಳ ಹಾಗೂ ಇತರೆ ಸೈಬರ್ ಅಪರಾಧಗಳ ಕುರಿತಂತೆ ಅರಿವನ್ನು ಮೂಡಿಸಲಾಗುತ್ತಿದೆ.<br>➢ ಶಾಲಾ ಮಕ್ಕಳಿಗೆ ರಸ್ತೆ ಸುರಕ್ಷತೆಯ ಬಗ್ಗೆ ಹಾಗೂ ಠಾಣೆಗಳಿಗೆ ಭೇಟಿ ನೀಡಿ ಪೊಲೀಸ್ ಠಾಣೆಗಳ ಕರ್ತವ್ಯ, ವಸ್ತುಸ್ಥಿತಿಗಳ ಬಗ್ಗೆ ಅರಿವು ಮೂಡಿಸಿ, ಮಕ್ಕಳಲ್ಲಿ ಸ್ನೇಹ ಭಾವವನ್ನು ಮೂಡಿಸಲಾಗುತ್ತಿದೆ.<br>➢ ತುರ್ತು ಸಂದರ್ಭಗಳಲ್ಲಿ ಸಂಪರ್ಕಿಸಬಹುದಾದ ದೂರವಾಣಿ ಮತ್ತು ಹೆಲ್ಪ್‌ಲೈನ್‌ಗಳ ಬಗ್ಗೆ (ಚೈಲ್ಡ್ ಹೆಲ್ಪ್‌ಲೈನ್-1098, ವುಮೆನ್ ಹೆಲ್ಪ್‌ಲೈನ್-1091, 1908 ಮಾದಕ ವಸ್ತುಗಳ ಬಗ್ಗೆ ಮಾಹಿತಿ ನೀಡುವ ಬಗ್ಗೆ ಅರಿವು ಮೂಡಿಸಲಾಗುತ್ತಿದೆ.<br>➢ ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳನ್ನೊಳಗೊಂಡಂತೆ, ಸಾರ್ವಜನಿಕರಲ್ಲಿ ಅರಿವು ಮೂಡಿಸಲು ವಿವಿಧ ಜಾಥಾ ಹಾಗೂ ರ್‍ಯಾಲಿಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.<br>➢ ಅಪರಾಧ ಕೃತ್ಯಗಳನ್ನು ತಡೆಗಟ್ಟಲು ಶಾಲಾ ಕಾಲೇಜುಗಳಿಗೆ ಮೇಲಿಂದ ಮೇಲೆ ಭೇಟಿ ನೀಡಿ ಶಾಲಾ ಕಾಲೇಜುಗಳ ಆವರಣದಿಂದ 100 ಮೀಟರ್ ಅಂತರದಲ್ಲಿ ಬರುವ ಮಾದಕ ವಸ್ತುಗಳ ಮಾರಾಟ ಮತ್ತು ಅಂಗಡಿಗಳನ್ನು ಇರದಂತೆ ಕ್ರಮ |

| | | |
|---|---|---|
| | | ಕೈಗೊಳ್ಳಲಾಗಿದೆ.<br>➢ ಮಹಿಳೆಯರು ಮತ್ತು ಮಕ್ಕಳ ಮೇಲಿನ ದೌರ್ಜನ್ಯವನ್ನು ತಡೆಗಟ್ಟುವ ನಿಟ್ಟಿನಲ್ಲಿ 2019-20ನೇ ಸಾಲಿನಲ್ಲಿ ರೂ. 700 ಲಕ್ಷಗಳು ಮತ್ತು 2020-21 ರಲ್ಲಿ ರೂ.100 ಲಕ್ಷಗಳ ಅನುದಾನವನ್ನು ನಿರ್ಭಯ ಯೋಜನೆ ಅಡಿಯಲ್ಲಿ ಬಿಡುಗಡೆ ಮಾಡಿದ್ದು, ಸದರಿ ಅನುದಾನದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಎರಡು ಹಂತದಲ್ಲಿ 800 ಪೊಲೀಸ್ ಠಾಣೆಗಳಲ್ಲಿ ಹೆಲ್ಪ್ ಡೆಸ್ಕ್‌ಗಳನ್ನು ಸ್ಥಾಪಿಸಲಾಗಿದೆ. ಮುಂದುವರೆದು, ಸದರಿ ಯೋಜನೆಗೆ 2021-22ನೇ ಸಾಲಿನಲ್ಲಿ ರೂ. 250 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.<br>➢ ಅಪರಿಚಿತ ವ್ಯಕ್ತಿಗಳ ಬಳಿ ಸಂಪರ್ಕ ಇಟ್ಟುಕೊಳ್ಳದಂತೆ, ಆಸೆ ಆಮಿಷಗಳನ್ನು ಒಡ್ಡುವ ಆಸಾಮಿಗಳ ಬಗ್ಗೆ ಮಹಿಳೆಯರಿಗೆ & ಮಕ್ಕಳಿಗೆ ಹಾಗೂ ಗ್ರಾಮಗಳಲ್ಲಿ ಸೂಕ್ತ ತಿಳುವಳಿಕೆಗಳನ್ನು ನೀಡಲಾಗಿರುತ್ತದೆ.<br>➢ ಪೋಕ್ಸೋ ಕಾಯ್ದೆಯ ಪರಿಚಯ, ಕಾಯ್ದೆಯಲ್ಲಿ ಪ್ರಕರಣಗಳನ್ನು ದಾಖಲಿಸುವಾಗ ಅನುಸರಿಸಬೇಕಾದ ಕ್ರಮಗಳು, ದೌರ್ಜನ್ಯಕೊಳಗಾದ ಮಕ್ಕಳೊಂದಿಗೆ ಹೇಗೆ ನಡೆದುಕೊಳ್ಳಬೇಕು, ಅವರ ಆರೈಕೆ, ವೈದ್ಯಕೀಯ ಚಿಕಿತ್ಸೆಗೆ ಒಳಪಡಿಸುವ ಕ್ರಮಗಳು, ಪುನರ್ವಸತಿ, ಮಾಧ್ಯಮಗಳ ಜವಾಬ್ದಾರಿ, ಸಮಾಜದ ಕರ್ತವ್ಯಗಳು, ಪರಿಹಾರ ಒದಗಿಸುವುದು ಹಾಗೂ ಇನ್ನಿತರ ವಿಷಯಗಳ ಕುರಿತು ತನಿಖಾಧಿಕಾರಿಗಳಿಗೆ ಸಹಾಯವಾಗುವ ನಿಟ್ಟಿನಲ್ಲಿ ನಿರ್ದಿಷ್ಟ ಕಾರ್ಯವಿಧಾನ (ಎಸ್.ಓ.ಪಿ) ಯನ್ನು ಸಿದ್ಧಪಡಿಸಿ ಎಲ್ಲಾ ಪೊಲೀಸ್ ಠಾಣೆಗಳಿಗೆ ಒದಗಿಸಲಾಗಿದೆ.<br>➢ ಅತ್ಯಾಚಾರಕ್ಕೆ ಒಳಗಾಗಿ ನೊಂದವರಿಗೆ ಸಂತ್ರಸ್ಥರ ಪರಿಹಾರ ಯೋಜನೆಯಡಿ ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ. 1 ಪಿಸಿಬಿ 2011, ದಿನಾಂಕ 31.03.2015 ರಂತೆ ಪರಿಹಾರ ಧನ ವಿತರಿಸಲಾಗುತ್ತಿದ್ದು, ಸದರಿ ಪರಿಹಾರ ಮೊತ್ತವನ್ನು ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ 42 ಪಿಸಿಬಿ 2018, ದಿನಾಂಕ.25.09.2018ರಲ್ಲಿ ಪರಿಷ್ಕರಿಸಿ ಹೆಚ್ಚಿಸಲಾಗಿದೆ. ಸದರಿ ಆದೇಶದಲ್ಲಿ ಸಾಮೂಹಿಕ ಅತ್ಯಾಚಾರ ಪ್ರಕರಣದ ಸಂತ್ರಸ್ಥರಿಗೆ ಕನಿಷ್ಠ ಪರಿಹಾರ ಮೊತ್ತವನ್ನು 5 ಲಕ್ಷ ಹಾಗೂ ಗರಿಷ್ಠ 10 ಲಕ್ಷ ಗಳಿಗೆ ಹಾಗೂ ಅತ್ಯಾಚಾರ ಪ್ರಕರಣದಲ್ಲಿ ಕನಿಷ್ಠ ಪರಿಹಾರ ಮೊತ್ತವನ್ನು 4 ಲಕ್ಷ ಹಾಗೂ ಗರಿಷ್ಠ 7 ಲಕ್ಷ ಗಳಿಗೆ ಮತ್ತು ಆಸಿಡ್ ದಾಳಿಗೊಳಗಾದ ಸಂತ್ರಸ್ಥರಿಗೆ ಕನಿಷ್ಠ 7 ಲಕ್ಷ ಹಾಗೂ ಗರಿಷ್ಠ 8 ಲಕ್ಷಗಳನ್ನು ನಿಗಧಿಗೊಳಿಸಿ ಆದೇಶಿಸಲಾಗಿದೆ. |

ಸಂಖ್ಯೆ: ಹೆಚ್‌ಡಿ 684 ಎಸ್ ಎಸ್ ಟಿ 2022

(ಆರಗ ಜ್ಞಾನೇಂದ್ರ)
ಗೃಹ ಸಚಿವರು